# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ

## ಚನ್ನರಾಯಪಟ್ಟಣ

**ಸಿಸಿ ಸಂಖ್ಯೆ 324/2022** **CW**-1 **PW**-1

**ಸಾಕ್ಷಿಯನ್ನು ದಿಃ 18.01.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಶಿವಶಂಕರ |
| ತಂದೆಯ ಹೆಸರುಃ | ನಾಗರಾಜು |
| ವಯಸ್ಸುಃ | 43 |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ನಾಯಸಿಂಗನಹಳ್ಳಿ |

**ಮುಖ್ಯವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಮೃತ ಪ್ರಸನ್ನಮೂರ್ತಿ ನನ್ನ ಅಣ್ಣ. ಚಾ ಸಾ 2 ಗೊತ್ತು.

ದಿನಾಂಕ 06.02.2022 ರಂದು ನಾನು ನಮ್ಮ ಊರಿನಲ್ಲಿ ಇದ್ದಾಗ ಸಂಜೆ 04.30-05.00 ಗಂಟೆ ಸಮಯದಲ್ಲಿ ನನಗೆ ದೂರವಾಣಿ ಕರೆ ಮಾಡಿ ಚನ್ನರಾಯಪಟ್ಟಣದ ಮಖಾನ್ ಸರ್ಕಲ್ ನ ಬಳಿ ನಮ್ಮ ಅಣ್ಣ ಪ್ರಸನ್ನಮೂರ್ತಿ ಬೈಕ್ ಅಪಘಾತವಾಗಿ ತೀರಿಕೊಂಡಿರುತ್ತಾರೆ ಎಂದು ತಿಳಿಸಿರುತ್ತಾರೆ. ನಂತರ ನಾನು ಸಂಜೆ 07.30-08.00 ಗಂಟೆ ಸಮಯದಲ್ಲಿ ನಾನು ಚನ್ನರಾಯಪಟ್ಟಣ ಸರ್ಕಾರಿ ಆಸ್ಪತ್ರೆಗೆ ಬಂದು ನೋಡಲಾಗಿ ನನ್ನ ಅಣ್ಣ ಪ್ರಸನ್ನಮೂರ್ತಿ ತೀರಿಕೊಂಡಿದ್ದರು. ನಂತರ ನಾವು ಪೋಲೀಸ್ ಠಾಣೆಗೆ ಹೋಗಿ ದೂರು ನೀಡಿರುತ್ತೇವೆ.

ಈಗ ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು .

ಈಗ ಸಾಕ್ಷಿಗೆ ಒಂದು ಮಹಜರ್ ನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿ ಪಿ 2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಅಪಘಾತವಾದ ಮಾರನೇ ದಿನ ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನಿ ಪಿ 2 ಕ್ಕೆ ನನ್ನ ಜೊತೆ

ಚಾ ಸಾ 2 ರವರು ಸಹಿ ಮಾಡಿರುತ್ತಾರೆ. ಸದರಿ ಅಪಘಾತ ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ಸದರಿ ದಿನದಂದು ನನ್ನ ಅಣ್ಣ ಹೋಗುತ್ತಿದ್ದ ದ್ವಿಚಕ್ರ ವಾಹನ ಸಂಖ್ಯೆ ಕೆ ಎ 13 ಇ ಡಿ 9908 ಕ್ಕೆ ಹಿಂಬದಿಯಿಂದ ಕೆ ಎ 04 ಎಂ ಡಿ 9401 ಮಾರುತಿ ಕಾರನ್ನು ಆರೋಪಿಯು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಡಿಕ್ಕಿಪಡಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತದ ಪರಿಣಾಮ ನನ್ನ ಅಣ್ಣನಿಗೆ ತೀವ್ರ ಸ್ವರೂಪದ ಗಾಯಗಳಾಗಿ ಮೃತಪಟ್ಟಿರುತ್ತಾನೆ ಎಂದರೆ ಗೊತ್ತಿಲ್ಲ. ಮೇಲೆ ಹೇಳಿದಂತೆ ನಾನು ಪೋಲೀಸರಿಗೆ ನಿ ಪಿ 1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 07.02.2022 ರಂದು ಚನ್ನರಾಯಪಟ್ಟಣ-ಶ್ರವಣಬೆಳಗೊಳ ರಸ್ತೆಯಲ್ಲಿ ಮಸೀದಿ ಹತ್ತಿರ ಪೋಲೀಸರು ಮಹಜರ್ ಮಾಡಲು ಬಂದಾಗ ನಾನು ನಿ ಪಿ 2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಆಗ ಸಮಯ 01.00-01.45 ಗಂಟೆ ಆಗಿತ್ತು ಎಂದರೆ ಸಮಯ ನನಗೆ ಗೊತ್ತಿಲ್ಲ ಎನ್ನುತ್ತಾರೆ. ಸದರಿ ಮಹಜರ್ ಗೆ ಚಾ ಸಾ 3 ಮತ್ತು 4 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನ ಸಂಖ್ಯೆ ಕೆ ಎ 13 ಇ ಡಿ 9908 ಮತ್ತು ಕೆ ಎ 04 ಎಂ ಡಿ 9401 ಮಾರುತಿ ಕಾರನ್ನು ಪೋಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯಿಂದ ಸದರಿ ಅಪಘಾತವಾಗಿರುತ್ತದೆ ಎಂದರೆ ನನಗೆ

ಗೊತ್ತಿಲ್ಲ. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ ಎನ್ ಎಸ್ ವಕೀಲರಿಂದ**

ನಿ ಪಿ 1 ನ್ನು ಪೋಲೀಸರು ಬರೆದಿರುತ್ತಾರೆ ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿ ಪಿ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿ ಪಿ 2 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಾನು ಸುಳ್ಳು ದೂರು ನೀಡಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**ಸಹಿ/-**

**(ದೀಪು.ಬಿ.ಸಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**